# <u>ಮಂಗಳೂರು ವಿಶ್ವವಿದ್ಯಾನಿಲಯ</u>

ದಿನಾಂಕ 20.12.2022ರಂದು ಪೂರ್ವಾಹ್ನ ಗಂಟೆ 10.00ಕ್ಕೆ ಸರಿಯಾಗಿ ಮಂಗಳೂರು ವಿಶ್ವವಿದ್ಯಾನಿಲಯದ ಆಡಳಿತ ಸೌಧದ ಸಿಂಡಿಕೇಟ್ ಸಭಾಂಗಣದಲ್ಲಿ ನಡೆದ ಸಿಂಡಿಕೇಟಿನ 2022ನೇ ಸಾಲಿನ ಎಂಟನೆಯ ಸಾಮಾನ್ಯ ಸಭೆಯ ನಡವಳಿಗಳು.

**ಉಪಸ್ಥಿತರು:**

| ಕ್ರ.ಸಂ. | | | ಸಹಿ |
|---|---|---|---|
| 1. | ಪ್ರೊ. ಪಿ. ಸುಬ್ರಹ್ಮಣ್ಯ ಯಡಪಡಿತ್ತಾಯ<br>ಕುಲಪತಿಗಳು | ಅಧ್ಯಕ್ಷರು | |
| 2. | ಪ್ರೊ. ಕರುಣಾಕರ್ ಎ. ಕೋಟೆಗಾರ್ | ಸದಸ್ಯರು | |
| 3. | ಶ್ರೀ ರವಿಚಂದ್ರ ಪಿ. ಎಂ. | ಸದಸ್ಯರು | |
| 4. | ಪ್ರೊ. ಜಯರಾಜ್ ಅಮೀನ್<br>ಡೀನರು, ಕಲಾ ನಿಕಾಯ | ಸದಸ್ಯರು | |
| 5. | ಶ್ರೀ ಲೆವಿನ್ ಡಿ'ಸೋಜ | ಸದಸ್ಯರು | |
| 6. | ಡಾ. ಉದಯಕುಮಾರ್ ಶೆಟ್ಟಿ | ಸದಸ್ಯರು | |
| 7. | ಶ್ರೀಮತಿ ನಳಿನಾಕ್ಷಿ ಎ. ಎಸ್. | ಸದಸ್ಯರು | |
| 8. | ಶ್ರೀ ಕೆ. ರಮೇಶ | ಸದಸ್ಯರು | |
| 9. | ಶ್ರೀ ವಿವೇಕಾನಂದ ಪನಿಯಾಳ | ಸದಸ್ಯರು | |
| 10. | ಶ್ರೀ ರವೀಂದ್ರನಾಥ ರೈ | ಸದಸ್ಯರು | |
| 11. | ಶ್ರೀ ಮೋಹನ್ ಪಡಿವಾಳ್ | ಸದಸ್ಯರು | |
| 12. | ಡಾ. ಎ. ಪಾರ್ವತಿ ಅಪ್ಪಯ್ಯ | ಸದಸ್ಯರು | |
| 13. | ಪ್ರೊ. ವಿಶ್ವನಾಥ<br>ಪ್ರಾಧ್ಯಾಪಕರು, ಸ್ನಾತಕೋತ್ತರ ಅರ್ಥಶಾಸ್ತ್ರ ವಿಭಾಗ | ಸದಸ್ಯರು | |
| 14. | ಡಾ. ಸಿಪ್ರಿಯನ್ ಮೊಂತೇರೋ<br>ಪ್ರಾಂಶುಪಾಲರು, ಶಿಕ್ಷಕರ ಶಿಕ್ಷಣ ಮಹಾವಿದ್ಯಾಲಯ,<br>ಸಾರ್ವಜನಿಕ ಶಿಕ್ಷಣ ಆಯುಕ್ತರ ಪರವಾಗಿ | ಸದಸ್ಯರು | |
| 15. | ಪ್ರೊ. ಪಿ. ಎಲ್. ಧರ್ಮ<br>ಕುಲಸಚಿವರು (ಪರೀಕ್ಷಾಂಗ) | ಸದಸ್ಯರು | |
| 16. | ಪ್ರೊ. ವೈ ಸಂಗಪ್ಪ<br>ಹಣಕಾಸು ಅಧಿಕಾರಿ (ಪ್ರಭಾರ) | ವಿಶೇಷ<br>ಆಹ್ವಾನಿತರು | |
| 17. | ಪ್ರೊ. ಕಿಶೋರ್ ಕುಮಾರ್ ಸಿ. ಕೆ.<br>ಕುಲಸಚಿವರು (ಆಡಳಿತ) | ಸದಸ್ಯ<br>ಕಾರ್ಯದರ್ಶಿ | |

## ಪ್ರಾರಂಭಿಕ

ಪ್ರಾರಂಭದಲ್ಲಿ ಕುಲಸಚಿವರು ಸಭಾಧ್ಯಕ್ಷರಾದ ಮಾನ್ಯ ಕುಲಪತಿಗಳು ಹಾಗೂ ಎಲ್ಲಾ ಸಿಂಡಿಕೇಟು ಸದಸ್ಯರುಗಳನ್ನು ಸಭೆಗೆ ಸ್ವಾಗತಿಸಿದರು.

- **ಸ್ವಾಗತ:**

I. ಕರ್ನಾಟಕ ರಾಜ್ಯ ವಿಶ್ವವಿದ್ಯಾನಿಲಯ ಅಧಿನಿಯಮ 2000ದ ಪ್ರಕರಣ 28(1)(ಎಫ್) ಪ್ರಕಾರ ಮಂಗಳೂರು ವಿಶ್ವವಿದ್ಯಾನಿಲಯದ ಸಿಂಡಿಕೇಟಿಗೆ ಸಂಯೋಜಿತ ಕಾಲೇಜುಗಳ ಪ್ರಾಂಶುಪಾಲರುಗಳ ಜೇಷ್ಠತೆ ಹಾಗೂ ಸರದಿಯ ನೆಲೆಯಲ್ಲಿ ಸದಸ್ಯರಾಗಿ ಮಾನ್ಯ ಕುಲಪತಿಗಳಿಂದ ನಾಮನಿರ್ದೇಶನಗೊಂಡಿರುವ ಡಾ. ಉದಯಕುಮಾರ್ ಶೆಟ್ಟಿ, ಪ್ರಾಂಶುಪಾಲರು, ಸರಕಾರಿ ಪ್ರಥಮ ದರ್ಜೆ ಕಾಲೇಜು ಮತ್ತು ಸ್ನಾತಕೋತ್ತರ ಅಧ್ಯಯನ ಕೇಂದ್ರ, ಶಂಕರನಾರಾಯಣ, ಕುಂದಾಪುರ ಇವರನ್ನು ಕುಲಸಚಿವರು ಸಭೆಗೆ ಸ್ವಾಗತಿಸಿದರು.

- **ಕೃತಜ್ಞತೆ:**

I. ಕರ್ನಾಟಕ ರಾಜ್ಯ ವಿಶ್ವವಿದ್ಯಾನಿಲಯ ಅಧಿನಿಯಮ 2000ದ ಪ್ರಕರಣ 28(1)(ಎಫ್) ಪ್ರಕಾರ ಮಂಗಳೂರು ವಿಶ್ವವಿದ್ಯಾನಿಲಯದ ಸಿಂಡಿಕೇಟಿಗೆ ಸಂಯೋಜಿತ ಕಾಲೇಜುಗಳ ಪ್ರಾಂಶುಪಾಲರುಗಳ ಜೇಷ್ಠತೆ ಹಾಗೂ ಸರದಿಯ ನೆಲೆಯಲ್ಲಿ ಸದಸ್ಯರಾಗಿ ಮಾನ್ಯ ಕುಲಪತಿಗಳಿಂದ ನಾಮನಿರ್ದೇಶನಗೊಂಡಿದ್ದ ಡಾ. ಶಂಕರ ಭಟ್, ಪ್ರಾಂಶುಪಾಲರು, ಸರಕಾರಿ ಪ್ರಥಮ ದರ್ಜೆ ಕಾಲೇಜು, ಬೆಳಂದೂರು, ಕಡಬ ತಾಲೂಕು ಇವರ ಸದಸ್ಯತ್ವದ ಅವಧಿಯು ದಿನಾಂಕ 13.12.2022ರಂದು ಕೊನೆಗೊಂಡಿರುವುದರಿಂದ ಸದರಿಯವರನ್ನು ಸಿಂಡಿಕೇಟು ಸದಸ್ಯತ್ವದಿಂದ ಮುಕ್ತಗೊಳಿಸಲಾಗಿದೆ.

ಇವರು ತಮ್ಮ ಸಿಂಡಿಕೇಟು ಸದಸ್ಯತ್ವದ ಅವಧಿಯಲ್ಲಿ ಮಂಗಳೂರು ವಿಶ್ವವಿದ್ಯಾನಿಲಯದ ಸರ್ವತೋಮುಖ ಪ್ರಗತಿಗೆ ಹಾಗೂ ಉನ್ನತ ಶಿಕ್ಷಣದ ಸರ್ವಾಂಗೀಣ ಅಭಿವೃದ್ಧಿಗೆ ಪೂರಕ ಸಲಹೆ ಮತ್ತು ಸಹಕಾರಗಳನ್ನು ನೀಡಿರುವುದಕ್ಕಾಗಿ ಇವರಿಗೆ ಸಿಂಡಿಕೇಟ್ ಹಾಗೂ ಮಂಗಳೂರು ವಿಶ್ವವಿದ್ಯಾನಿಲಯದ ಪರವಾಗಿ ಕೃತಜ್ಞತಾಪೂರ್ವಕ ಅಭಿನಂದನೆಗಳನ್ನು ಸಲ್ಲಿಸಲಾಯಿತು.

## ಪ್ರಾಸ್ತಾವಿಕ

ಮಾನ್ಯ ಕುಲಪತಿಗಳು ಪ್ರಾಸ್ತಾವಿಕವಾಗಿ ಮಾತನಾಡುತ್ತಾ ಈ ಕೆಳಗಿನ ವಿಷಯಗಳನ್ನು ಸಭೆಗೆ ತಿಳಿಸಿದರು.

1. ಅಖಿಲ ಭಾರತೀಯ ವಿದ್ಯಾರ್ಥಿ ಪರಿಷತ್, ಮಂಗಳೂರು ಇವರು ಮಾನ್ಯ ಕುಲಪತಿಗಳಿಗೆ ಸಲ್ಲಿಸಿದ ಮನವಿ ಪತ್ರ ದಿನಾಂಕ 20.12.2022ರಲ್ಲಿ ಮಂಗಳೂರು ವಿಶ್ವವಿದ್ಯಾನಿಲಯದ ಪರೀಕ್ಷೆ ಮತ್ತು ಅಂಕಪಟ್ಟಿಗಳಿಗೆ ಸಂಬಂಧಿಸಿದ ಸಮಸ್ಯೆಗಳನ್ನು ಕೂಡಲೇ ಬಗೆಹರಿಸುವಂತೆ ಆಗ್ರಹಿಸಿರುವುದನ್ನು

ಮಾನ್ಯ ಕುಲಪತಿಗಳು ಸಭೆಯ ಗಮನಕ್ಕೆ ತಂದರು. ಸದರಿ ಪತ್ರದಲ್ಲಿ ತಿಳಿಸಿರುವ ಎಲ್ಲಾ ಅಂಶಗಳಿಗೆ ಸಂಬಂಧಿಸಿ ವಿಸ್ತೃತವಾದ ಮಾಹಿತಿಯನ್ನು ಕುಲಸಚಿವರು (ಪರೀಕ್ಷಾಂಗ) ಇವರು ಸಭೆಗೆ ಮಂಡಿಸಿದರು. ಎರಡು ಮತ್ತು ನಾಲ್ಕನೇ ಸೆಮಿಸ್ಟರ್‌ನ ಮೌಲ್ಯಮಾಪನ ಕಾರ್ಯವನ್ನು ಶೀಘ್ರವಾಗಿ ಪೂರ್ಣಗೊಳಿಸಿ, ಜನವರಿ 20ರೊಳಗೆ ಫಲಿತಾಂಶ ನೀಡಲಾಗುವುದೆಂಬುದಾಗಿಯೂ ತಿಳಿಸಿದರು. ಮೌಲ್ಯಮಾಪನ ಕಾರ್ಯಕ್ಕಾಗಿ ಅಗತ್ಯವಿದ್ದಲ್ಲಿ ಕಾಲೇಜುಗಳಿಗೆ ಒಂದು ವಾರಕ್ಕೆ ಮೀರದಂತೆ ರಜೆಯನ್ನು ಘೋಷಿಸಲು ಸಿಂಡಿಕೇಟು ಅನುಮತಿಯನ್ನು ನೀಡಿತು. ಸದರಿ ತರಗತಿಗಳ ಕೊರತೆಯನ್ನು ಸರಿದೂಗಿಸಲು ಶನಿವಾರ, ಭಾನುವಾರ ಅಥವಾ ಸಾರ್ವತ್ರಿಕ ರಜಾದಿನಗಳಂದು ತರಗತಿಗಳನ್ನು ನಡೆಸಬೇಕೆಂಬುದಾಗಿಯೂ ನಿರ್ಣಯಿಸಲಾಯಿತು.

2. ಅಂತರಾಷ್ಟ್ರೀಯ ಸಾಂಸ್ಕೃತಿಕ ಜಾಂಬೂರಿಗೆ ಮಂಗಳೂರು ವಿಶ್ವವಿದ್ಯಾನಿಲಯದ ಅನುದಾನ ರೂ.10,00,000.00 (ರೂಪಾಯಿ ಹತ್ತು ಲಕ್ಷ ಮಾತ್ರ) ವನ್ನು ನೀಡುವ ಪ್ರಸ್ತಾವನೆಯನ್ನು ಮಾನ್ಯ ಕುಲಪತಿಗಳು ಸಭೆಯ ಗಮನಕ್ಕೆ ತಂದರು. ಅಂತರಾಷ್ಟ್ರೀಯ ಜಾಂಬೂರಿಯು ಮಂಗಳೂರು ವಿಶ್ವವಿದ್ಯಾನಿಲಯದ ಸಂಯೋಜಿತ ಕಾಲೇಜಾದ ಆಳ್ವಾಸ್ ಕಾಲೇಜು, ಮೂಡಬಿದರೆ ಇಲ್ಲಿ ನಡೆಯುತ್ತಿರುವುದು ವಿಶ್ವವಿದ್ಯಾನಿಲಯಕ್ಕೆ ಹೆಮ್ಮೆಯ ವಿಚಾರವಾಗಿರುವುದರಿಂದ ಮತ್ತು ಸದರಿ ಕಾರ್ಯಕ್ರಮದ ಮೂಲಕ ವಿದ್ಯಾರ್ಥಿಗಳಿಗೆ ಉತ್ತೇಜನವನ್ನು ನೀಡುವ ಸದುದ್ದೇಶದಿಂದ ಸಭೆಯು ಸರ್ವಾನುಮತದಿಂದ ರೂ.10,00,000.00 (ರೂಪಾಯಿ ಹತ್ತು ಲಕ್ಷ ಮಾತ್ರ) ಗಳ ಅನುದಾನವನ್ನು ಮಂಜೂರು ಮಾಡಲು ಒಪ್ಪಿಗೆಯನ್ನು ಸೂಚಿಸಿತು.

3. ಮಂಗಳೂರು ವಿಶ್ವವಿದ್ಯಾನಿಲಯದ ಕ್ಯಾಂಪಸ್‌ನಲ್ಲಿ ನಡೆಸಲಾಗುತ್ತಿರುವ ಶ್ರೀ ಗಣೇಶೋತ್ಸವ ಕಾರ್ಯಕ್ರಮಕ್ಕೆ ಸಂಬಂಧಿಸಿ, ವಿದ್ಯಾರ್ಥಿಗಳಿಂದ ಸ್ವೀಕೃತವಾದ ಪತ್ರವನ್ನು ಮಾನ್ಯ ಕುಲಪತಿಗಳು ಸಭೆಯ ಗಮನಕ್ಕೆ ತಂದರು. ಸದರಿ ಪತ್ರದಲ್ಲಿ ಪ್ರಸ್ತಾಪಿಸಲಾದ ವಿಷಯಗಳ ಬಗ್ಗೆ ಚರ್ಚಿಸುತ್ತಾ, ರಾಷ್ಟ್ರೀಯ ಭಾವೈಕ್ಯತೆ ಮತ್ತು ಸಾಂಸ್ಕೃತಿಕ ಅಸ್ಮಿತೆಯನ್ನು ಉಳಿಸಿಕೊಂಡು ಈ ಹಿಂದಿನಂತೆ ಆಚರಣೆಯನ್ನು ಮುಂದುವರಿಸಬಹುದೆಂಬುದಾಗಿ ಸಿಂಡಿಕೇಟು ನಿರ್ಣಯಿಸಿತು. ಮುಂದುವರಿದು, ವಿದ್ಯಾರ್ಥಿ ಕ್ಷೇಮಪಾಲನಾ ನಿರ್ದೇಶನಾಲಯದ ಮೇಲುಸ್ತುವಾರಿಯಲ್ಲಿಯೇ ಸದರಿ ಕಾರ್ಯಕ್ರಮವನ್ನು ನಡೆಸಬಹುದೆಂಬುದಾಗಿ ಸಿಂಡಿಕೇಟು ನಿರ್ಣಯಿಸಿತು.

4. ಮಾನ್ಯ ರಾಜ್ಯಪಾಲರ ಕಛೇರಿಯಿಂದ ಗೌರವ ಡಾಕ್ಟರೇಟ್ ಪದವಿಗೆ ಪರಿಗಣಿಸುವ ಸಲುವಾಗಿ ಗಣ್ಯ ವ್ಯಕ್ತಿಯೋರ್ವರು ವಿವಿಧ ಕ್ಷೇತ್ರಗಳಲ್ಲಿ ಸಲ್ಲಿಸಿದ ಸೇವಾ ವಿವರದ ಮಾಹಿತಿ ಮತ್ತು ಸಂಘ ಸಂಸ್ಥೆಗಳು ಸದರಿಯವರಿಗೆ ನೀಡಿರುವ ಪ್ರಶಸ್ತಿಗಳ ವಿವರಗಳನ್ನು ಲಗತ್ತಿಸುತ್ತಾ ಮಂಗಳೂರು ವಿಶ್ವವಿದ್ಯಾನಿಲಯಕ್ಕೆ ಬರೆದ ಪತ್ರವನ್ನು ಮಾನ್ಯ ಕುಲಪತಿಗಳು ಸಿಂಡಿಕೇಟು ಸಭೆಗೆ ಮಂಡಿಸಿದರು. ಸದರಿ ವಿವರಗಳನ್ನು ಸಭೆಯಲ್ಲಿ ಪರಿಶೀಲಿಸಿ, ಪರಿಗಣಿಸಲಾಯಿತು. ಆದರೆ, ಸಿಂಡಿಕೇಟು ಸಭೆಯು ಸದರಿಯರ ಹೆಸರನ್ನು ಗೌರವ ಡಾಕ್ಟರೇಟ್ ಪದವಿಗೆ ಶಿಫಾರಸ್ಸು ಮಾಡಿರುವುದಿಲ್ಲ.

## I. ನಡವಳಿಗಳ ದೃಢೀಕರಣ

1. ದಿನಾಂಕ 02.12.2022ರಂದು ನಡೆದ ಸಿಂಡಿಕೇಟಿನ 2022ನೇ ಸಾಲಿನ ಆರನೇ ವಿಶೇಷ ಸಭೆಯ ನಡವಳಿಯ ದೃಢೀಕರಣ.

**ಕಾರ್ಯಸೂಚಿ ಸಂಖ್ಯೆ:** **ಸಿಬ್ಬಂದಿ:ವಿ.ಸ.6:19(2022)**

ವಿಷಯ: ನೂತನ ಕೊಡಗು ವಿಶ್ವವಿದ್ಯಾನಿಲಯದ ಸ್ಥಾಪನೆ-ಆರ್ಥಿಕ, ಭೌತಿಕ ಹಾಗೂ ಮಾನವ ಸಂಪನ್ಮೂಲಗಳ ವರ್ಗಾವಣೆಗೆ ಸಂಬಂಧಿಸಿ ಸರಕಾರದಿಂದ ವಿಧಿಸಲಾಗಿರುವ ಷರತ್ತುಗಳ ಬಗ್ಗೆ.

ತಿದ್ದುಪಡಿ ನಿರ್ಣಯ: ಸಮಿತಿಯ ವರದಿಯನ್ನು ಗಮನಿಸಲಾಯಿತು. ವರದಿಯನ್ನು ಸರಕಾರದ ಗಮನಕ್ಕೆ ತರಲು ಕ್ರಮ ಕೈಗೊಳ್ಳಬಹುದೆಂಬುದಾಗಿ ಸಿಂಡಿಕೇಟು ನಿರ್ಣಯಿಸಿತು.

## II. ಅನುಸರಣಾ ವರದಿಯ ಅನುಮೋದನೆ

1. ದಿನಾಂಕ 15.09.2022ರಂದು ನಡೆದ ಸಿಂಡಿಕೇಟಿನ 2022ನೇ ಸಾಲಿನ ಆರನೇ ಸಾಮಾನ್ಯ ಸಭೆಯ ಅನುಸರಣಾ ವರದಿಯ ಅನುಮೋದನೆ.

   - **ಅನುಮೋದಿಸಲಾಯಿತು.** -

**2.** ದಿನಾಂಕ 08.11.2022ರಂದು ನಡೆದ ಸಿಂಡಿಕೇಟಿನ 2022ನೇ ಸಾಲಿನ ಏಳನೇ ಸಾಮಾನ್ಯ ಸಭೆಯ ಅನುಸರಣಾ ವರದಿಯ ಅನುಮೋದನೆ.

   - **ಅನುಮೋದಿಸಲಾಯಿತು.** -

## III. ಈ ಸಿಂಡಿಕೇಟು ಸಭೆಗೆ ಮಂಡಿಸಿರುವ ಕಾರ್ಯಸೂಚಿಗಳು.

**ಕಾರ್ಯಸೂಚಿ ಸಂಖ್ಯೆ:** **ಸಾರ್ವತ್ರಿಕ:ಸಾ.ಸ.8:1(2022)**

ವಿಷಯ: ಭಾರತೀಯ ಯುವ ರೆಡ್ ಕ್ರಾಸ್ ಘಟಕಕ್ಕೆ ಮಂಗಳೂರು ವಿಶ್ವವಿದ್ಯಾನಿಲಯದಿಂದ ನೋಡೆಲ್ ಅಧಿಕಾರಿಯನ್ನು ನಿಯೋಜಿಸುವ ಬಗ್ಗೆ.

ನಿರ್ಣಯ: ಡಾ. ಗಣಪತಿ ಗೌಡ, ಸಹ ಪ್ರಾಧ್ಯಾಪಕರು ಇವರನ್ನು ಮುಂದಿನ ಆದೇಶದವರೆಗೆ ಭಾರತೀಯ ಯುವ ರೆಡ್ ಕ್ರಾಸ್ ಘಟಕಕ್ಕೆ ಮಂಗಳೂರು ವಿಶ್ವವಿದ್ಯಾನಿಲಯದಿಂದ ನೋಡೆಲ್ ಅಧಿಕಾರಿಯನ್ನಾಗಿ ನೇಮಿಸಬಹುದೆಂಬುದಾಗಿ ಸಿಂಡಿಕೇಟು ನಿರ್ಣಯಿಸಿತು.

**ಕಾರ್ಯಸೂಚಿ ಸಂಖ್ಯೆ:** **ಸಾರ್ವತ್ರಿಕ:ಸಾ.ಸ.8:2(2022)**

ವಿಷಯ: ಮಂಗಳೂರು ವಿಶ್ವವಿದ್ಯಾನಿಲಯದಲ್ಲಿ M/S Anthropic Technologies LLP, Bangalore ಇವರ ಪ್ರಸ್ತಾವನೆಗೆ ಅನುಮೋದನೆ ನೀಡುವ ಬಗ್ಗೆ.

ನಿರ್ಣಯ: ಅನುಮೋದಿಸಲಾಯಿತು.

**ಕಾರ್ಯಸೂಚಿ ಸಂಖ್ಯೆ:** **ಎಸಿಸಿ:ಸಾ.ಸ.8:3(2022)**

ವಿಷಯ: ಘಟಕ ಕಾಲೇಜುಗಳ ಸ್ನಾತಕ ಪದವಿ ಕಾರ್ಯಕ್ರಮಗಳಲ್ಲಿ ವಿಶ್ವವಿದ್ಯಾನಿಲಯದ ಸಿಬ್ಬಂದಿಗಳ ಮಕ್ಕಳಿಗೆ ಸೀಟು ನೀಡುವ ಬಗ್ಗೆ.

ನಿರ್ಣಯ: ಶೈಕ್ಷಣಿಕ ವರ್ಷ 2023-24ನೇ ಸಾಲಿನಿಂದ ಅನ್ವಯವಾಗುವಂತೆ, ವಿಶ್ವವಿದ್ಯಾನಿಲಯದ ಘಟಕ ಕಾಲೇಜುಗಳ ಸ್ನಾತಕ ಪದವಿ ಕಾರ್ಯಕ್ರಮಗಳಲ್ಲಿ ಮೆರಿಟ್ ಆಧಾರದ ಮೇಲೆ ಒಂದು ಸೀಟನ್ನು (out of the intake) ವಿಶ್ವವಿದ್ಯಾನಿಲಯದ ಖಾಯಂ ಉದ್ಯೋಗಿಗಳ ಗರಿಷ್ಠ ಇಬ್ಬರು ಮಕ್ಕಳಿಗೆ ಸೀಮಿತಗೊಳಿಸಿ ಮೀಸಲಿಡಬಹುದೆಂಬುದಾಗಿ ನಿರ್ಣಯಿಸಲಾಯಿತು. ಮುಂದುವರಿದು, ಪ್ರಸ್ತುತ ಕರ್ತವ್ಯದಲ್ಲಿರುವ ಸಿಬ್ಬಂದಿಗಳ ಮಕ್ಕಳು ಲಭ್ಯವಿಲ್ಲದಿದ್ದಲ್ಲಿ ವಿಶ್ವವಿದ್ಯಾನಿಲಯದ ಸೇವೆಯಿಂದ ನಿವೃತ್ತರಾಗಿರುವ ಸಿಬ್ಬಂದಿಗಳ ಮಕ್ಕಳಿಗೆ ಸದರಿ ಸೀಟುಗಳನ್ನು ಹಂಚಿಕೆ ಮಾಡಬಹುದೆಂಬುದಾಗಿ ಸಿಂಡಿಕೇಟು ನಿರ್ಣಯಿಸಿತು.

**ಕಾರ್ಯಸೂಚಿ ಸಂಖ್ಯೆ:** **ಸಿಬ್ಬಂದಿ:ಸಾ.ಸ.8:4(2022)**

ವಿಷಯ: ಡಾ. ಬಿ.ಕೆ. ಸರೋಜಿನಿ, ಪ್ರಾಧ್ಯಾಪಕರು, ಕೈಗಾರಿಕಾ ರಸಾಯನಶಾಸ್ತ್ರ ವಿಭಾಗ, ಮಂಗಳೂರು ವಿಶ್ವವಿದ್ಯಾನಿಲಯ, ಮಂಗಳಗಂಗೋತ್ರಿ ಇವರ ಸಬ್ಬಾಟಿಕಲ್ ರಜೆಯನ್ನು ಮುಗಿಸಿ ಕರ್ತವ್ಯಕ್ಕೆ ಹಾಜರಾದ ಬಗ್ಗೆ ಹಾಗೂ ಸಂಶೋಧನಾ ಕಾರ್ಯದ ವರದಿಯನ್ನು ಸಲ್ಲಿಸುವ ಬಗ್ಗೆ.

ನಿರ್ಣಯ: ವರದಿಯನ್ನು ಸಿಂಡಿಕೇಟು ಗಮನಿಸಿತು.

**ಕಾರ್ಯಸೂಚಿ ಸಂಖ್ಯೆ:** **ಸಿಬ್ಬಂದಿ:ಸಾ.ಸ.8:5(2022)**

ವಿಷಯ: ಶ್ರೀಮತಿ ಗೀತಾ ಕೆ., ಶೀಘ್ರಲಿಪಿಗಾರರು, ಮಂಗಳೂರು ವಿಶ್ವವಿದ್ಯಾನಿಲಯ ಇವರ ನಿಯೋಜನಾ ಅವಧಿ ಪೂರ್ಣಗೊಳ್ಳುತ್ತಿರುವುದರಿಂದ ಸದರಿಯವರ ಸೇವೆಯನ್ನು ಮಂಗಳೂರು ವಿಶ್ವವಿದ್ಯಾನಿಲಯಕ್ಕೆ ಒದಗಿಸುವಂತೆ ಸರಕಾರವನ್ನು ಕೋರುವ ಬಗ್ಗೆ.

ನಿರ್ಣಯ: ಅನುಮೋದಿಸಲಾಯಿತು.

**ಕಾರ್ಯಸೂಚಿ ಸಂಖ್ಯೆ:** **ಸಿಂಡಿಕೇಟು: ಸಾ.ಸ.8:6(2022)**

ವಿಷಯ: ಪ್ರೊ. ವಿಶ್ವನಾಥ, ಸಿಂಡಿಕೇಟು ಸದಸ್ಯರು - ಇವರು ಸಲ್ಲಿಸಿರುವ ಪ್ರಸ್ತಾವನೆ ಬಗ್ಗೆ.

ನಿರ್ಣಯ: ಸಭೆಗೆ ಮಂಡಿಸಲಾದ ವಿವರಗಳನ್ನು ಸಿಂಡಿಕೇಟು ಅಂಗೀಕರಿಸಿತು.

**ಕಾರ್ಯಸೂಚಿ ಸಂಖ್ಯೆ: ಡಿಇವಿ: ಸಾ.ಸ.8:7(2022)**

ವಿಷಯ: ಮಂಗಳೂರು ವಿಶ್ವವಿದ್ಯಾನಿಲಯದ ಆವರಣದಲ್ಲಿ “ದೀನ ದಯಾಳ್ ಉಪಾಧ್ಯಾಯ ಸೌಹಾರ್ದ ವಿದ್ಯಾರ್ಥಿನಿಲಯ” ಸಂಕೀರ್ಣವನ್ನು ನಿರ್ಮಾಣ ಮಾಡಲು ಜಮೀನು ನೀಡುವ ಬಗ್ಗೆ.

ನಿರ್ಣಯ: ಅನುಮೋದಿಸಲಾಯಿತು.

ಸದರಿ ಪ್ರಸ್ತಾವನೆಗೆ ಸಂಬಂಧಿಸಿ, ಜಾಗವನ್ನು ಗುರುತಿಸಲು ಈ ಕೆಳಗಿನ ಸಮಿತಿಯನ್ನು ರಚಿಸಲಾಯಿತು.

1. ಪ್ರೊ. ವಿಶ್ವನಾಥ, ಅಧ್ಯಕ್ಷರು
   ಸಿಂಡಿಕೇಟು ಸದಸ್ಯರು ಹಾಗೂ ಪ್ರಾಧ್ಯಾಪಕರು
   ಸ್ನಾತಕೋತ್ತರ ಅರ್ಥಶಾಸ್ತ್ರ ಅಧ್ಯಯನ ವಿಬಾಗ,
   ಮಂಗಳೂರು ವಿಶ್ವವಿದ್ಯಾನಿಲಯ
2. ಶ್ರೀ ರವಿಚಂದ್ರ ಪಿ.ಎಂ. ಸದಸ್ಯರು
   ಸಿಂಡಿಕೇಟು ಸದಸ್ಯರು
   ಮಂಗಳೂರು ವಿಶ್ವವಿದ್ಯಾನಿಲಯ
3. ಪ್ರೊ. ಜಯರಾಜ್ ಅಮೀನ್ ಸದಸ್ಯರು
   ಸಿಂಡಿಕೇಟು ಸದಸ್ಯರು ಹಾಗೂ ಪ್ರಾಧ್ಯಾಪಕರು
   ಸ್ನಾತಕೋತ್ತರ ರಾಜ್ಯಶಾಸ್ತ್ರ ಅಧ್ಯಯನ ವಿಬಾಗ,
   ಮಂಗಳೂರು ವಿಶ್ವವಿದ್ಯಾನಿಲಯ
4. ಕಾರ್ಯಕಾರಿ ಅಭಿಯಂತರರು ಸದಸ್ಯ ಸಂಚಾಲಕರು
   ಮಂಗಳೂರು ವಿಶ್ವವಿದ್ಯಾನಿಲಯ

ಸಮಿತಿಯು ವರದಿಯನ್ನು 15 ದಿನಗಳ ಒಳಗಾಗಿ ವಿಶ್ವವಿದ್ಯಾನಿಲಯಕ್ಕೆ ಸಲ್ಲಿಸಬೇಕೆಂಬುದಾಗಿ ಸಿಂಡಿಕೇಟು ನಿರ್ಣಯಿಸಿತು.

**ಕಾರ್ಯಸೂಚಿ ಸಂಖ್ಯೆ: ಸಿಂಡಿಕೇಟು: ಸಾ.ಸ.8:8(2022)**

ವಿಷಯ: ಪದವಿ ಮಟ್ಟದ ತತ್ವಶಾಸ್ತ್ರ ಅಧ್ಯಯನ ಮಂಡಳಿಯನ್ನು ಪುನರ್‍ರಚಿಸುವ ಬಗ್ಗೆ.

ನಿರ್ಣಯ: ಪದವಿ ಮಟ್ಟದ ತತ್ವಶಾಸ್ತ್ರ ಅಧ್ಯಯನ ಮಂಡಳಿಯನ್ನು ಪುನರ್‍ರಚಿಸುವ ಅಧಿಕಾರವನ್ನು ಮಾನ್ಯ ಕುಲಪತಿಗಳಿಗೆ ನೀಡಲಾಯಿತು.

**ಕಾರ್ಯಸೂಚಿ ಸಂಖ್ಯೆ: ಸಿಬ್ಬಂದಿ: ಸಾ.ಸ.8:9(2022)**

ವಿಷಯ: ಡಾ. ಪ್ರೀತಿ ಕೀರ್ತಿ ಡಿ'ಸೋಜ, ಸಹಾಯಕ ಪ್ರಾಧ್ಯಾಪಕರು, ವಾಣಿಜ್ಯಶಾಸ್ತ್ರ ವಿಭಾಗ, ಮಂಗಳೂರು ವಿಶ್ವವಿದ್ಯಾನಿಲಯ, ಇವರಿಗೆ ಕೆರಿಯರ್ ಅಡ್ವಾನ್ಸ್‌ಮೆಂಟ್ ಸ್ಕೀಂನಡಿಯಲ್ಲಿ ಸಹಾಯಕ ಪ್ರಾಧ್ಯಾಪಕ ಶೈಕ್ಷಣಿಕ ಹಂತ 12 ರಿಂದ ಸಹ ಪ್ರಾಧ್ಯಾಪಕ ಶೈಕ್ಷಣಿಕ ಹಂತ 13Aಗೆ ಪದೋನ್ನತಿ ನೀಡುವುದಕ್ಕೆ ಸಂಬಂಧಿಸಿ ಆಯ್ಕೆ ಸಮಿತಿಯ ಶಿಫಾರಸ್ಸುಗಳನ್ನು ಅನುಮೋದಿಸುವ ಬಗ್ಗೆ.

ನಿರ್ಣಯ: ಅನುಮೋದಿಸಲಾಯಿತು.

**ಕಾರ್ಯಸೂಚಿ ಸಂಖ್ಯೆ: ಹಣಕಾಸು: ಸಾ.ಸ.8:10(2022)**

ವಿಷಯ: ಮಂಗಳೂರು ವಿಶ್ವವಿದ್ಯಾನಿಲಯದ 2018-19ನೇ ಸಾಲಿನ ಲೆಕ್ಕಪರಿಶೋಧನ ವರದಿ - ಅನುಪಾಲನಾ ವರದಿಯ ಅನುಮೋದನೆ ಕುರಿತು.

ನಿರ್ಣಯ: ವರದಿಯನ್ನು ಪರಿಶೀಲಿಸಿ, ಅನುಮೋದಿಸಲಾಯಿತು. ಸಂಬಂಧಿತ ವಿಶೇಷ ತಜ್ಞರ ಅಭಿಪ್ರಾಯದಂತೆ ಕ್ರಮಕೈಗೊಳ್ಳುವುದು.

**ಕಾರ್ಯಸೂಚಿ ಸಂಖ್ಯೆ: ಹಣಕಾಸು: ಸಾ.ಸ.8:11(2022)**

ವಿಷಯ: 2021-22ನೇ ಸಾಲಿನ ವಾರ್ಷಿಕ ಲೆಕ್ಕ ಪತ್ರಗಳ ಅನುಮೋದನೆಯ ಬಗ್ಗೆ.

ನಿರ್ಣಯ: ಅನುಮೋದಿಸಲಾಯಿತು.

ಅಪೂರ್ಣ ವಿವರಗಳನ್ನು ನೀಡಿರುವುದರಿಂದ ಶ್ರೀ ವಿವೇಕಾನಂದ ಪನಿಯಾಲ ಇವರು ಪ್ರಸ್ತಾವನೆಗೆ ತಮ್ಮ ಅಸಮ್ಮತಿಯನ್ನು ಸೂಚಿಸಿದರು.

**ಕಾರ್ಯಸೂಚಿ ಸಂಖ್ಯೆ: ಡಿಇವಿ: ಸಾ.ಸ.8:12(2022)**

ವಿಷಯ: ಮಂಗಳೂರು ವಿಶ್ವವಿದ್ಯಾನಿಲಯ ಮತ್ತು ICCR, Government of India ಇವರೊಂದಿಗೆ ಒಡಂಬಡಿಕೆ ಮಾಡಿಕೊಳ್ಳುವ ಪ್ರಸ್ತಾವನೆಯ ಬಗ್ಗೆ.

ನಿರ್ಣಯ: ಅನುಮೋದಿಸಲಾಯಿತು.

**ಕಾರ್ಯಸೂಚಿ ಸಂಖ್ಯೆ: ಡಿಇವಿ: ಸಾ.ಸ.8:13(2022)**

ವಿಷಯ: SERB ಪ್ರಾಜೆಕ್ಟ್, ಅನ್ವಯಿಕ ಪ್ರಾಣಿಶಾಸ್ತ್ರ ವಿಭಾಗ - Bioinformatic and statistical Analysis Software with System ನ ಖರೀದಿ ಬಗ್ಗೆ.

ನಿರ್ಣಯ: ದಿನಾಂಕ 16.12.2022ರ ಖರೀದಿ ಸಮಿತಿ ಸಭೆಯ ಶಿಫಾರಸ್ಸನ್ನು ಅನುಮೋದಿಸಲಾಯಿತು.

**ಕಾರ್ಯಸೂಚಿ ಸಂಖ್ಯೆ: ಸಿಬ್ಬಂದಿ: ಸಾ.ಸ.8:14(2022)**

ವಿಷಯ: ಮಂಗಳೂರು ವಿಶ್ವವಿದ್ಯಾನಿಲಯ ಉದ್ಯೋಗಿಗಳ ವರ್ಗೀಕರಣ, ನಿಯಂತ್ರಣ ಮತ್ತು ಮೇಲ್ಮನವಿ ನಿಯಮಗಳು ಪರಿನಿಯಮಕ್ಕೆ ತಿದ್ದುಪಡಿ ಮಾಡುವ ಬಗ್ಗೆ.

ನಿರ್ಣಯ: ಅನುಮೋದಿಸಲಾಯಿತು.

**ಕಾರ್ಯಸೂಚಿ ಸಂಖ್ಯೆ: ಸಿಬ್ಬಂದಿ: ಸಾ.ಸ.8:15(2022)**

ವಿಷಯ: ಡಾ. ಕುಮಾರಸ್ವಾಮಿ ಎಂ., ಸಹ ಪ್ರಾಧ್ಯಾಪಕರು, ಇತಿಹಾಸ ವಿಭಾಗ, ವಿಶ್ವವಿದ್ಯಾನಿಲಯ ಕಾಲೇಜು, ಮಂಗಳೂರು ಇವರಿಗೆ ವಿಶ್ವವಿದ್ಯಾನಿಲಯದ ಸೇವೆಯಿಂದ ಸ್ವಯಂ ನಿವೃತ್ತಿ ಹೊಂದಲು ಅನುಮತಿ ನೀಡುವ ಬಗ್ಗೆ.

ನಿರ್ಣಯ: ಅನುಮೋದಿಸಲಾಯಿತು.

**ಕಾರ್ಯಸೂಚಿ ಸಂಖ್ಯೆ: ಸಿಬ್ಬಂದಿ: ಸಾ.ಸ.8:16(2022)**

ವಿಷಯ: ಮಂಗಳೂರು ವಿಶ್ವವಿದ್ಯಾನಿಲಯದ ಘಟಕ ಕಾಲೇಜುಗಳಿಗೆ ಪ್ರಭಾರ ಪ್ರಾಂಶುಪಾಲರ ನೇಮಕಾತಿ ಬಗ್ಗೆ.

ನಿರ್ಣಯ: ವಿಸ್ತೃತ ಚರ್ಚೆಯ ಅಗತ್ಯವಿರುವುದರಿಂದ ಪ್ರಸ್ತಾವನೆಯನ್ನು ಮುಂದೂಡಲಾಯಿತು. ಸಮಗ್ರ ಮಾಹಿತಿಯೊಂದಿಗೆ ಮುಂದಿನ ಸಿಂಡಿಕೇಟು ಸಭೆಗೆ ಮಂಡಿಸಬೇಕೆಂಬುದಾಗಿ ಸಿಂಡಿಕೇಟು ನಿರ್ಣಯಿಸಿತು.

**ಕಾರ್ಯಸೂಚಿ ಸಂಖ್ಯೆ: ಆಡಳಿತ: ಸಾ.ಸ.8:17(2022)**

ವಿಷಯ: ಮಂಗಳೂರು ವಿಶ್ವವಿದ್ಯಾನಿಲಯ ಕಾಲೇಜು, ಬನ್ನಡ್ಕ ಇಲ್ಲಿಗೆ ಗಣಕಯಂತ್ರಗಳನ್ನು ಖರೀದಿಸುವ ಬಗ್ಗೆ.

ನಿರ್ಣಯ: ದಿನಾಂಕ 16.12.2022ರ ಖರೀದಿ ಸಮಿತಿ ಸಭೆಯ ಶಿಫಾರಸ್ಸನ್ನು ಅನುಮೋದಿಸಲಾಯಿತು.

**ಕಾರ್ಯಸೂಚಿ ಸಂಖ್ಯೆ: ಎಸಿಸಿ: ಸಾ.ಸ.8:18(2022)**

ವಿಷಯ: ಡಾ. ರಾಮಕೃಷ್ಣ Former Director, Zoological Survey of India, Kolkatta, ಇವರಿಗೆ ಡಿ.ಎಸ್ಸಿ. (Doctor of Sciences) ಪದವಿ ನೀಡುವ ಬಗ್ಗೆ.

ನಿರ್ಣಯ: ನಿಯಮಾನುಸಾರ ಪ್ರಕ್ರಿಯೆ ಕೈಗೊಳ್ಳಲು ಸಿಂಡಿಕೇಟು ಅನುಮತಿ ನೀಡಿತು.

**ಕಾರ್ಯಸೂಚಿ ಸಂಖ್ಯೆ: ಸಿಂಡಿಕೇಟು: ಸಾ.ಸ.8:19(2022)**

ವಿಷಯ: ಪದವಿ ಮಟ್ಟದ Financial Education & Investment Awareness ಕೌಶಲ್ಯವರ್ಧಕ ಕೋರ್ಸಿಗೆ ಸಂಬಂಧಿಸಿದ INTER DISCIPLINARY ಅಧ್ಯಯನ ಮಂಡಳಿಯನ್ನು ಪುನರ್ರಚಿಸುವ ಬಗ್ಗೆ.

ನಿರ್ಣಯ: ಅಧ್ಯಯನ ಮಂಡಳಿಯನ್ನು ಪುನರ್ರಚಿಸುವ ಅಧಿಕಾರವನ್ನು ಮಾನ್ಯ ಕುಲಪತಿಗಳಿಗೆ ನೀಡಲಾಯಿತು.

**ಕಾರ್ಯಸೂಚಿ ಸಂಖ್ಯೆ: ಸಿಬ್ಬಂದಿ: ಸಾ.ಸ.8:20(2022)**

ವಿಷಯ: ಡಾ. ಕರುಣಾಕರ ಎನ್. ವಿ., ಅತಿಥಿ ಉಪನ್ಯಾಸಕರು, ಕನ್ನಡ ವಿಭಾಗ, ಫೀಲ್ಡ್ ಮಾರ್ಷಲ್ ಕೆ. ಎಂ. ಕಾರ್ಯಪ್ಪ ಕಾಲೇಜು, ಮಡಿಕೇರಿ ಇವರ ಸೇವೆಯನ್ನು ಖಾಯಂಗೊಳಿಸುವ ಬಗ್ಗೆ.

ನಿರ್ಣಯ: ಪ್ರಸ್ತಾವನೆಯನ್ನು ಚರ್ಚಿಸಲಾಯಿತು. ಈ ಕುರಿತು ವಿವರವಾದ ಟಿಪ್ಪಣಿ ಹಾಗೂ ಕಾರಣಗಳನ್ನು ಲಗತ್ತಿಸಿದ್ದು, ಅದಕ್ಕೆ ಪೂರಕವಾಗಿ ಸಿಂಡಿಕೇಟು ಈ ಕೆಳಗಿನ ನಿರ್ಣಯವನ್ನು ಕೈಗೊಂಡಿತು.

The Syndicate resolves to regularize the service of Dr. Karunakar N. V. from the date of his appointment itself together with all applicable and consequential service benefits accruing from the date of his initial appointment till date and including future benefits in accordance with law subject to the following conditions.

ಆದರೆ, ಸದರಿಯವರು ತಾತ್ಕಾಲಿಕವಾಗಿ ನೇಮಕಾತಿ ಹೊಂದಿದ ದಿನಾಂಕದಿಂದ ಅನ್ವಯವಾಗುವಂತೆ ಕಾಲ್ಪನಿಕವಾಗಿ ವೇತನ ನಿಗದೀಕರಿಸಿ, ಆರ್ಥಿಕ ಸೌಲಭ್ಯವನ್ನು ನೇಮಕಾತಿ ಆದೇಶದ ದಿನಾಂಕದಿಂದ ಅನ್ವಯವಾಗುವಂತೆ ನೀಡಬಹುದೆಂಬುದಾಗಿ ಸಿಂಡಿಕೇಟು ನಿರ್ಣಯಿಸಿತು.

ಸದರಿ ಪ್ರಸ್ತಾವನೆಗೆ ಸಂಬಂಧಿಸಿ, ಪ್ರೊ. ಕರುಣಾಕರ್ ಎ. ಕೋಟೆಗಾರ್ ಇವರು ಈ ಹಿಂದೆ ನೀಡಿರುವ ತಮ್ಮ ಅಸಮ್ಮತಿ (Dissent Note)ಯನ್ನು ಯಥಾವತ್ತಾಗಿ ದಾಖಲಿಸಬೇಕೆಂಬುದಾಗಿ ವಿನಂತಿಸಿದರು.

ಪ್ರೊ. ಕರುಣಾಕರ್ ಎ. ಕೋಟೆಗಾರ್ ಇವರು ಸಲ್ಲಿಸಿದ Dissent Note ಈ ಕೆಳಗಿನಂತಿದೆ.

1. There are many such cases in the University and Justice should be given to all the affected teachers not only for the people who have financial capacity to go to the Court.
2. I anticipate serious violation of rules of UGC Recruitment in future.
3. It may set bad precedent in future and the University may get affected financially.

**ಕಾರ್ಯಸೂಚಿ ಸಂಖ್ಯೆ:** **ಸಿಬ್ಬಂದಿ: ಸಾ.ಸ.8:21(2022)**

ವಿಷಯ: DRAFT STATUTES RELATING TO APPOINTMENT AND PROMOTION OF TEACHERS AND OTHER ACADEMIC STAFF AND MEASURES FOR THE MAINTENANCE OF STANDARDS IN HIGHER EDUCATION IN THE MANGALORE UNIVERSITY AS PER THE UGC REGULATIONS 2018 ನ್ನು ಅನುಮೋದಿಸುವ ಬಗ್ಗೆ.

ನಿರ್ಣಯ: ಅನುಮೋದಿಸಲಾಯಿತು.

**ಇತರ ವಿಷಯಗಳು**

1. ಪರಿಶಿಷ್ಟ ಜಾತಿ, ಪರಿಶಿಷ್ಟ ಪಂಗಡ ಹಾಗೂ ಹಿಂದುಳಿದ ವರ್ಗದ ವಿದ್ಯಾರ್ಥಿಗಳ ವಿದ್ಯಾರ್ಥಿವೇತನಕ್ಕೆ ಅರ್ಜಿ ಸಲ್ಲಿಸಲು ತೊಂದರೆಯಾಗದ ರೀತಿಯಲ್ಲಿ ಮಂಗಳೂರು ವಿಶ್ವವಿದ್ಯಾನಿಲಯದ ಫಲಿತಾಂಶ ನೀಡಲು ಸಾಧ್ಯವಿಲ್ಲದಿದ್ದಲ್ಲಿ ಅರ್ಜಿ ಸಲ್ಲಿಸಲು ನಿಗದಿಪಡಿಸಲಾಗಿರುವ ಅಂತಿಮ ದಿನಾಂಕವನ್ನು ವಿಸ್ತರಿಸುವಂತೆ ಕೋರಿ ಸಂಬಂಧಪಟ್ಟ ಇಲಾಖೆಗೆ ಪತ್ರ ಬರೆಯಲು ಮತ್ತು ಈ ಬಗ್ಗೆ ಸೂಕ್ತ ಕ್ರಮಕೈಗೊಳ್ಳಲು ಪರೀಕ್ಷಾಂಗ ಕುಲಸಚಿವರಿಗೆ ತಿಳಿಸಲಾಯಿತು.

2. ಮಂಗಳೂರು ವಿಶ್ವವಿದ್ಯಾನಿಲಯದ ಮೌಲ್ಯಮಾಪಕರಿಗೆ ನೀಡುತ್ತಿರುವ ಸಂಭಾವನೆಯ ಪಾವತಿಗಾಗಿ ಈ ಹಿಂದೆ ಅನುಸರಿಸುತ್ತಿದ್ದ Spot Payment ವಿಧಾನವನ್ನು ಅಳವಡಿಸಿಕೊಳ್ಳಬಹುದೆಂಬುದಾಗಿ ಸಿಂಡಿಕೇಟು ನಿರ್ಣಯಿಸಿತು.

3. ಅಂಕಪಟ್ಟಿ ನೀಡುವಲ್ಲಿ ಆಗಿರುವ ವಿಳಂಬದ ಬಗ್ಗೆ ಸಿಂಡಿಕೇಟು ಸದಸ್ಯರಾದ ಶ್ರೀ ಕೆ. ರಮೇಶ ಇವರು ಪ್ರಸ್ತಾಪಿಸಿದರು. ಈ ಬಗ್ಗೆ ಸಭೆಯಲ್ಲಿ ಚರ್ಚಿಸಲಾಗಿ, ಶೀಘ್ರದಲ್ಲಿ ಅಂಕಪಟ್ಟಿ ನೀಡಲು ಕ್ರಮ ಕೈಗೊಳ್ಳುವುದಾಗಿ ಕುಲಸಚಿವರು (ಪರೀಕ್ಷಾಂಗ) ಇವರು ಸಭೆಗೆ ತಿಳಿಸಿದರು.

4. ಮಂಗಳೂರು ವಿಶ್ವವಿದ್ಯಾನಿಲಯದ ಉಪಕುಲಸಚಿವರ ಭಡ್ತಿಗೆ ಸಂಬಂಧಿಸಿ, ಸರಕಾರಕ್ಕೆ ಬರೆಯಲಾದ ಪತ್ರದ ಬಗ್ಗೆ ಸಿಂಡಿಕೇಟು ಸದಸ್ಯರಾದ ಪ್ರೊ. ವಿಶ್ವನಾಥ ಇವರು ಸಭೆಯಲ್ಲಿ ಪ್ರಸ್ತಾಪಿಸಿದರು. ಈ ಬಗ್ಗೆ ಕುಲಸಚಿವರು ಸದರಿ ಪತ್ರಕ್ಕೆ ಸಂಬಂಧಿಸಿದ ವಿವರಗಳನ್ನು ಸಭೆಗೆ ನೀಡುತ್ತಾ, ಸರ್ಕಾರದ ಮುಂದಿನ ನಿರ್ದೇಶನವರೆಗೆ ಯಾವುದೇ ಮುಂಭಡ್ತಿ ಪ್ರಕ್ರಿಯೆಗಳನ್ನು ನಡೆಸದಂತೆ ತಿಳಿಸಿ ವಿಶ್ವವಿದ್ಯಾನಿಲಯದಲ್ಲಿ ಸ್ವೀಕೃತವಾದ ಪತ್ರವನ್ನು ಸಭೆಯ ಗಮನಕ್ಕೆ ತಂದರು. ಅಂತಿಮವಾಗಿ, ಉಪಕುಲಸಚಿವರ ಮುಂಭಡ್ತಿಗೆ ಸಂಬಂಧಿಸಿ, ಸರಕಾರಕ್ಕೆ ಮಗದೊಮ್ಮೆ ಪತ್ರ ಬರೆಯಬೇಕೆಂಬುದಾಗಿ ಸಿಂಡಿಕೇಟು ನಿರ್ಣಯಿಸಿತು.

5. ಮಂಗಳೂರು ವಿಶ್ವವಿದ್ಯಾನಿಲಯದಲ್ಲಿ Double Entry system ನ್ನು ಶೀಘ್ರವಾಗಿ ಪೂರ್ಣಗೊಳಿಸಲು ಅಗತ್ಯವಿರುವ ಸಿಬ್ಬಂದಿಗಳನ್ನು ಸದರಿ ಕಾರ್ಯಕ್ಕೆ ನಿಯೋಜಿಸಲು ಕ್ರಮಕೈಗೊಳ್ಳಬೇಕೆಂಬುದಾಗಿ ಸಿಂಡಿಕೇಟು ನಿರ್ಣಯಿಸಿತು.

6. ಶ್ರೀ ಯಾದವ ಇವರ ಹೆಸರಿನಲ್ಲಿ ಸಿಂಡಿಕೇಟು ಸದಸ್ಯರಿಗೆ ಬರೆದ ಪತ್ರವನ್ನು ಸಿಂಡಿಕೇಟು ಸದಸ್ಯರಾದ ಶ್ರೀ ವಿವೇಕಾನಂದ ಪನಿಯಾಲ ಇವರು ಸಭೆಯ ಗಮನಕ್ಕೆ ತಂದರು. ಸಿಂಡಿಕೇಟು ಸದಸ್ಯರಾದ ಪ್ರೊ. ವಿಶ್ವನಾಥ ಇವರು ಮಾತನಾಡುತ್ತಾ, ದಿನಾಂಕ 06.12.2022ರಂದು ನಡೆದ ಡಾ. ಬಿ. ಆರ್. ಅಂಬೇಡ್ಕರ್‌ರವರ ಪ್ರತಿಮೆ ಅನಾವರಣ ಮತ್ತು 66ನೇ ಮಹಾ ಪರಿನಿರ್ವಾಣ ದಿನಾಚರಣೆಯ ಸಂದರ್ಭದಲ್ಲಿ ಕೆಲವು ಸಿಬ್ಬಂದಿಗಳು ಪ್ರತಿಭಟನೆಗೆ ಪ್ರಯತ್ನಿಸಿದರು ಎಂದು ಸಭೆಯ ಗಮನಕ್ಕೆ ತಂದರು. ಈ ಬಗ್ಗೆ ಪರಿಶೀಲಿಸಿ, ನಿಯಮಾನುಸಾರ ಸೂಕ್ತ ಕ್ರಮ ಕೈಗೊಳ್ಳುವಂತೆ ಕುಲಸಚಿವರಿಗೆ ತಿಳಿಸಲಾಯಿತು. ವರದಿಯನ್ನು ಸಿಂಡಿಕೇಟು ಸಭೆಗೆ ಮಂಡಿಸಬೇಕೆಂಬುದಾಗಿ ಸಿಂಡಿಕೇಟು ನಿರ್ಣಯಿಸಿತು.

ಮಾನ್ಯ ಕುಲಪತಿಗಳು ಸದಸ್ಯರ ಸಲಹೆ ಸಹಕಾರಗಳಿಗೆ ಧನ್ಯವಾದಗಳನ್ನು ಅರ್ಪಿಸಿ ಸಭೆಯನ್ನು ಮುಕ್ತಾಯಗೊಳಿಸಿದರು.

ಸಹಿ/- ಸಹಿ/-

**ಕುಲಸಚಿವರು** **ಕುಲಪತಿಗಳು.**